RNU AIR DHARWAD

# MAY 29 2024
# ALL INDIA RADIO- DHARWAD
# PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ರಾಜ್ಯದ ವಿವಿಧ ಅಭಿವೃದ್ಧಿ ವಿಚಾರಗಳ ಕುರಿತು ಕೇಂದ್ರ ಸಚಿವರೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚರ್ಚೆ.
- ಡೆಂಘಿ ರೋಗ ತಡೆಗೆ ಸೂಕ್ತ ಕ್ರಮವಹಿಸುವಂತೆ ಸಚಿವ ದಿನೇಶ ಗುಂಡೂರಾವ್ ಅಧಿಕಾರಿಗಳಿಗೆ ಸೂಚನೆ.
- ಅಂಗನವಾಡಿ ಕಾರ್ಯಕರ್ತೆಯರ ಗೌರವಧನ ಹೆಚ್ಚಿಸಲು ಕ್ರಮ – ಸಚಿವೆ ಲಕ್ಷ್ಮೀ ಹೆಬ್ಬಾಳಕರ.
- ಜನರ ಸಮಸ್ಯೆಗಳಿಗೆ ಪೂರಕವಾಗಿ ಸ್ಪಂದಿಸುವಂತೆ ಅಧಿಕಾರಿಗಳಿಗೆ ಸಚಿವ ಮಧು.ಎಸ್.ಬಂಗಾರಪ್ಪ ನಿರ್ದೇಶನ.

ಈಗ ವಾರ್ತೆಗಳ ವಿವರ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೊಸದಿಲ್ಲಿಯಲ್ಲಿ ನಿನ್ನೆ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿ, ರಾಜ್ಯದ ವಿವಿಧ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಮತ್ತು ಇತರ ಪ್ರಮುಖ ವಿಚಾರಗಳ ಕುರಿತು ಚರ್ಚಿಸಿದರು. ರಾಜ್ಯದಲ್ಲಿ 5 ಸಾವಿರದ 225 ಕಿಲೋ ಮೀಟರ್ ಉದ್ದದ 39 ತಾತ್ವಿಕ ಅನುಮೋದನೆ ದೊರಕಿದ ರಸ್ತೆಗಳನ್ನು, ರಾಷ್ಟ್ರೀಯ ಹೆದ್ದಾರಿಯಾಗಿ ಘೋಷಿಸುವ ಪ್ರಕ್ರಿಯೆ ನೆನೆಗುದಿಗೆ ಬಿದ್ದಿದೆ. ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ಕೋರಿದರು. ಬೆಳಗಾವಿ ನಗರದಲ್ಲಿ ಹಳೆ ರಾಷ್ಟ್ರೀಯ ಹೆದ್ದಾರಿಯಲ್ಲಿ ಮೇಲುಸೇತುವೆ ನಿರ್ಮಾಣಕ್ಕೆ ಅನುಮೋದನೆ ನೀಡುವುದು, ಬೆಳಗಾವಿ ಜಿಲ್ಲೆಯ ಗೋಕಾಕ್ ಜಲಪಾತದಲ್ಲಿ ಕೇಬಲ್ ಕಾರ್ ಸೌಲಭ್ಯ ಕಲ್ಪಿಸುವ ಯೋಜನೆ, ಕಿತ್ತೂರು ಪಟ್ಟಣದಿಂದ ಬೈಲಹೊಂಗಲವನ್ನು ಸಂಪರ್ಕಿಸುವ ರಸ್ತೆಯ ಸುಧಾರಣೆ, ಕಲಬುರಗಿ ಮತ್ತು ರಾಯಚೂರಿನಲ್ಲಿ ಬೈಪಾಸ್ ನಿರ್ಮಾಣ ಹೀಗೆ ರಾಜ್ಯದಲ್ಲಿ ಸುಗಮ ಸಂಚಾರಕ್ಕಾಗಿ ವಿವಿಧ ರಸ್ತೆ ಅಭಿವೃದ್ಧಿ ಯೋಜನೆಗಳಿಗೆ ಮನವಿ ಸಲ್ಲಿಸಿದರು.

ರಾಜ್ಯದ ವಿವಿಧ ಯೋಜನೆಗಳನ್ನು ಕೇಂದ್ರ ಸರ್ಕಾರದ ಗಮನಕ್ಕೆ ತಂದು, ಅವುಗಳನ್ನು ಜಾರಿ ಮಾಡಲು ಒತ್ತಡ ಹಾಕುವ ಪ್ರಯತ್ನ ಮಾಡುವಂತೆ ರಾಜ್ಯದ ಸಂಸದರು ಮತ್ತು ಕೇಂದ್ರ ಸಚಿವರ ಜೊತೆ ಸಮಾಲೋಚನೆ ನಡೆಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನಿನ್ನೆ ದೆಹಲಿಯಲ್ಲಿ ಹೇಳಿದ್ದಾರೆ. ಇದೇ ಸಂದರ್ಭದಲ್ಲಿ ರಾಜ್ಯದ ಹಲವು ಸಚಿವರು ಕೂಡ ಕೇಂದ್ರದ ವಿವಿಧ ಇಲಾಖೆಗಳ ಸಚಿವರನ್ನು ಭೇಟಿ ಮಾಡಿ ರಾಜ್ಯದಲ್ಲಿ ಬಾಕಿ ಯೋಜನೆಗಳಿಗೆ ಅನುಮತಿ ಸೇರಿದಂತೆ ವಿವಿಧ ಬೇಡಿಕೆಗಳನ್ನು ಮುಂದಿಟ್ಟಿದ್ದಾರೆ ಎಂದರು.

ದೆಹಲಿ ಪ್ರವಾಸದಲ್ಲಿರುವ ಸಮಾಜ ಕಲ್ಯಾಣ ಖಾತೆ ಸಚಿವ ಡಾಕ್ಟರ್ ಎಚ್.ಸಿ.ಮಹದೇವಪ್ಪ, ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ಸಚಿವ ಡಾಕ್ಟರ್ ವಿರೇಂದ್ರ ಕುಮಾರ ಅವರನ್ನು ಭೇಟಿ ಮಾಡಿ, ಇಲಾಖೆಯ ಕಾರ್ಯಕ್ರಮಗಳಿಗೆ ಹೆಚ್ಚಿನ ಅನುದಾನ ಬಿಡುಗಡೆ ಮಾಡುವಂತೆ ಮನವಿ ಮಾಡಿದರು.

*******

ರಾಜ್ಯದಲ್ಲಿ ಡೆಂಘಿ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ರೋಗ ತಡೆಗೆ ಸೂಕ್ತ ಕ್ರಮವಹಿಸುವಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ ಗುಂಡೂರಾವ್ ಹೇಳಿದ್ದಾರೆ. ಬಾಗಲಕೋಟೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಾರ್ಯಾಲಯದ ಸಹಯೋಗದಲ್ಲಿ ಹಮ್ಮಿಕೊಂಡ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಭಿಯಾನದ ರೂಪದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದ್ದು, ಪ್ರತಿ ಶುಕ್ರವಾರ ಆಶಾ ಕಾರ್ಯಕರ್ತೆಯರು ಸೇರಿದಂತೆ ಇಲಾಖೆಯ ಎಲ್ಲ ಅಧಿಕಾರಿಗಳು ಸಿಬ್ಬಂದಿ

ಸೇರಿ, ಮನೆ ಮನೆಗೆ ಭೇಟಿ ನೀಡಿ ಜಾಗೃತಿ ಮೂಡಿಸುವುದಲ್ಲದೇ ರೋಗದ ಮುನ್ಸೂಚನೆ ಹಾಗೂ ಲಕ್ಷಣ ತಿಳಿಸಬೇಕು ಎಂದು ಹೇಳಿದರು.

*******

ಇಂದು ಡಿಜಿಟಲ್ ತಂತ್ರಜ್ಞಾನ ಸಾಕ ಸ್ಟ ಮುಂದುವರೆದಿದ್ದು, ತಂತ್ರಜ್ಞಾನವನ್ನು ಸದುಪಯೋಗಪಡಿಸಿಕೊಂಡು ವೃತ್ತಿಯಲ್ಲಿ ಕೌಶಲ್ಯತೆ ತಂದುಕೊಳ್ಳಬೇಕು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಖಾತೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅಂಗನವಾಡಿ ಕಾರ್ಯಕರ್ತೆಯರಿಗೆ ಸಲಹೆ ನೀಡಿದ್ದಾರೆ. ಬೆಳಗಾವಿಯಲ್ಲಿ ನಿನ್ನೆ ಅಂಗನವಾಡಿ ಕಾರ್ಯಕರ್ತೆಯರಿಗೆ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಇಂದು ಅಂಗನವಾಡಿಗಳು ಬಡವರ ಮತ್ತು ಗ್ರಾಮೀಣ ಮಕ್ಕಳ ಬದುಕು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ. ಅಂಗನವಾಡಿ ಕಾರ್ಯಕರ್ತೆಯರ ಗೌರವಧನ ಹೆಚ್ಚಿಸಲು ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಲಾಗಿದ್ದು, ಮುಂಬರುವ ದಿನಗಳಲ್ಲಿ ಸೂಕ್ತ ಗೌರವಧನ ನೀಡಲಾಗುವುದು ಎಂದರು.

*******

ಜನರ ಸಮಸ್ಯೆಗಳಿಗೆ ತಕ್ಷಣದ ಪರಿಹಾರ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಸರ್ಕಾರ ಕಾರ್ಯೋನ್ಮುಖವಾಗಿದೆ ಎಂದು ಸಚಿವ ಮಧು.ಎಸ್.ಬಂಗಾರಪ್ಪ ಹೇಳಿದ್ದಾರೆ. ಶಿವಮೊಗ್ಗದ ಜಿಲ್ಲಾಡಳಿತ ಆಯೋಜಿಸಿದ್ದ ಜನ ಸ್ಪಂದನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಜನಪರವಾಗಿರುವ ಈ ಕಾರ್ಯಕ್ರಮ ಜನಸ್ನೇಹಿಯಾಗಿದೆ. ವಿವಿಧ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಜನರ ಸಮಸ್ಯೆಗಳಿಗೆ ಪೂರಕವಾಗಿ ಸ್ಪಂದಿಸಬೇಕು. ಜಟಿಲ ಸಮಸ್ಯೆಗಳಿದ್ದಲ್ಲಿ ಇಲಾಖೆಯ ಹಿರಿಯ ಅಧಿಕಾರಿಗಳ ಸಲಹೆ ಪಡೆಯಬೇಕು. ಅಗತ್ಯವಿದ್ದಲ್ಲಿ ಸಚಿವರ ಗಮನಕ್ಕೆ ತರುವಂತೆ ಸಲಹೆ ನೀಡಿದರು.

*******

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ಬೆಳಗ್ಗೆ 11 ಗಂಟೆಗೆ ಆಕಾಶವಾಣಿಯ ಜನಪ್ರಿಯ 'ಮನ್ ಕಿ ಬಾತ್'ನ 111 ನೇ ಸಂಚಿಕೆಯಲ್ಲಿ, ದೇಶ, ವಿದೇಶಗಳ ಜನತೆಯೊಂದಿಗೆ, ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಕಾರ್ಯಕ್ರಮವನ್ನು ಆಕಾಶವಾಣಿ ಮತ್ತು ದೂರದರ್ಶನ, AIR ನ್ಯೂಸ್ ವೆಬ್‌ಸೈಟ್ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನ ಸಂಪೂರ್ಣ ನೆಟ್‌ವರ್ಕ್‌ನಲ್ಲಿ ಪ್ರಸಾರ ಮಾಡಲಾಗುತ್ತದೆ. ಆಕಾಶವಾಣಿ ಹಿಂದಿ ಪ್ರಸಾರದ ನಂತರ ತಕ್ಷಣವೇ ಪ್ರಾದೇಶಿಕ ಭಾ ೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡುತ್ತದೆ.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

ರಾಜ್ಯದಲ್ಲಿ ಪಶು ಇಲಾಖೆಯಲ್ಲಿ ಖಾಲಿ ಇರುವ 10 ಸಾವಿರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಎಂದು ಪಶುಸಂಗೋಪನಾ ಖಾತೆ ಸಚಿವ ಕೆ. ವೆಂಕಟೇಶ್ ತಿಳಿಸಿದ್ದಾರೆ.

ರಾಯಚೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಲಾಖೆಯಲ್ಲಿ ಸುಮಾರು 10 ಸಾವಿರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು. ಪ್ರಸ್ತುತ 4 ಸಾವಿರ ಪಶು ವೈದ್ಯರ ನೇಮಕಾತಿಗೆ ಸರ್ಕಾರ ಅನುಮತಿ ನೀಡಿದೆ ಎಂದರು.

*******

ನಾಗರಿಕರಿಗೆ ಉತ್ತಮ ಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಆಡಳಿತ ಸುಧಾರಣೆ ಪ್ರಕ್ರಿಯೆ ನಿರಂತರವಾಗಿ ನಡೆಯಬೇಕು. ತಾಂತ್ರಿಕ ಯುಗದಲ್ಲಿ ಪ್ರತಿಕ್ಷಣವೂ ಅಮೂಲ್ಯವಾಗಿದ್ದು, ಸಾರ್ವಜನಿಕರಿಗೆ ಪಾರದರ್ಶಕ ಹಾಗೂ ನ್ಯಾಯಬದ್ಧವಾದ ಆಡಳಿತ ದೊರಕಬೇಕು. ಸಾರ್ವಜನಿಕರ ಕೆಲಸಗಳನ್ನು ನಿಯಮಾನುಸಾರ ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಕರ್ನಾಟಕ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ.ದೇಶಪಾಂಡೆ ಹೇಳಿದ್ದಾರೆ. ಬೆಳಗಾವಿಯಲ್ಲಿ ನಿನ್ನೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಎಲ್ಲ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಮತ್ತು ಸಾರ್ವಜನಿಕರ ಸಲಹೆಗಳನ್ನು

ಆಧರಿಸಿ ಆಡಳಿತದಲ್ಲಿ ಪಾರದರ್ಶಕತೆ, ಸರಳತೆ ತರಲು ಅಗತ್ಯ ಸುಧಾರಣಾ ಕ್ರಮಗಳನ್ನು ತರಲು ಆಯೋಗವು ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿದರು.

*******

ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ, ಸರ್ಕಾರದ ಸೌಲಭ್ಯಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವುದು ಸರ್ಕಾರದ ಉದ್ದೇಶವಾಗಿದೆ. ಕಂದಾಯ ಇಲಾಖೆಯ ಒತ್ತುವರಿ ಸಮಸ್ಯೆ, ಖಾತೆ ಸಮಸ್ಯೆ, ಸಾಗುವಳಿ ಚೀಟಿ ಮುಂತಾದ ಹಲವು ಸಮಸ್ಯೆಗಳಿಗೆ ಕಾನೂನಿನ ಚೌಕಟ್ಟಿನಲ್ಲಿ ಬಗೆಹರಿಸಲಾಗುವುದು ಎಂದು ಹೊಸಕೋಟೆ ಶಾಸಕ ಹಾಗೂ ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮದ ಅಧ್ಯಕ್ಷ ಶರತ್ ಕುಮಾರ್ ಬಚ್ಚೇಗೌಡ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆಯಲ್ಲಿ ತಾಲ್ಲೂಕು ಆಡಳಿತ ವತಿಯಿಂದ ಆಯೋಜಿಸಲಾದ ಜನಸ್ಪಂದನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

*******

ಉತ್ತರ ಕನ್ನಡ ಸಾವಯವ ಒಕ್ಕೂಟ ಹಾಗೂ ನೆಲಸಿರಿ ಸಂಸ್ಥೆಯ ಜಂಟಿ ಆಶ್ರಯದಲ್ಲಿ ಇಂದು ಶಿರಸಿಯ ಸಾವಯವ ಒಕ್ಕೂಟ ಕೇಂದ್ರದಲ್ಲಿ ಹಲಸು ಮತ್ತು ಮಲೆನಾಡು ಮೇಳ ಹಾಗೂ ವಿಚಾರ ಸಂಕಿರಣ ಆಯೋಜಿಸಲಾಗಿದೆ. ಎರಡು ದಿನಗಳ ಕಾಲ ನಡೆಯುವ ಮೇಳಕ್ಕೆ ಶಿರಸಿ ಸಿದ್ದಾಪುರ ಶಾಸಕ ಭೀಮಣ್ಣ ಟಿ. ನಾಯ್ಕ ಇಂದು ಚಾಲನೆ ನೀಡಲಿದ್ದಾರೆ ಎಂದು ಕರ್ನಾಟಕ ಜೀವ ವೈವಿಧ್ಯ ಮಂಡಳಿಯ ನಿಕಟಪೂರ್ವ ಅಧ್ಯಕ್ಷ ಅನಂತ ಹೆಗಡೆ ಅಶೀಸರ ಆಕಾಶವಾಣಿಗೆ ' ಮಾಹಿತಿ ನೀಡಿದ್ದಾರೆ.

*******

ರಾಜ್ಯದ ಕರಾವಳಿ ಜಿಲ್ಲೆಗಳಿಗೆ ಹೊಂದಿಕೊಂಡಂತ ಮಲೆನಾಡು ಜಿಲ್ಲೆಗಳಲ್ಲಿ ತುಂತುರು ಮಳೆ ಮುಂದುವರೆಯುವ ಸಾಧ್ಯತೆ ಇದೆ. ಜುಲೈ 4 ರಿಂದ ಮುಂಗಾರು ಪುನಶ್ಚೇತನಗೊಳ್ಳುವ ನಿರೀಕ್ಷೆಯಿದ್ದು, ವ್ಯಾಪಕವಾಗಿ ಸಾಧಾರಣದಿಂದ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ. ಉತ್ತರ ಕನ್ನಡ, ಉಡುಪಿ, ಕೊಡಗು, ಚಿಕ್ಕಮಗಳೂರು, ಶಿವಮೊಗ್ಗ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಹಾಗೂ ಬೆಳಗಾವಿ, ಹಾವೇರಿ, ಧಾರವಾಡ, ಹಾಸನ, ಮೈಸೂರು ಜಿಲ್ಲೆಗಳಿಗೆ ಯೆಲ್ಲೊ ಅಲರ್ಟ್ ಘೋಷಿಸಲಾಗಿದೆ. ರಾಯಚೂರು, ಯಾದಗಿರಿ, ಬೀದರ್, ಕಲಬುರ್ಗಿ, ಗದಗ, ಚಿಕ್ಕಬಳ್ಳಾಪುರ, ಬೆಂಗಳೂರು, ದಾವಣಗೆರೆ, ಕೋಲಾರ, ಮಂಡ್ಯ, ತುಮಕೂರು ಜಿಲ್ಲೆಗಳಲ್ಲೂ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

*******

ಈಗ ಸಂಕ್ಷಿಪ್ತ ಸುದ್ದಿಗಳು

ಭಾರತೀಯ ಚಾರ್ಟರ್ಡ್ ಅಕೌಂಟೆಂಟ್ಸ್ ಸಂಸ್ಥೆ ಐ.ಸಿ.ಎ.ಐ. 75 ವರ್ಷಗಳನ್ನು ಪೂರ್ಣಗೊಳಿಸುತ್ತಿರುವ ಹಿನ್ನೆಲೆಯಲ್ಲಿ ನಾಳೆ "ಸಿಎ ರನ್ ಫಾರ್ ವಿಕಸಿತ್ ಭಾರತ್" ಎಂಬ ವಿಷಯದಡಿ ಎಲ್ಲ ಪ್ರಾದೇಶಿಕ ಮಂಡಳಿಗಳು ಮತ್ತು ಶಾಖೆಗಳಲ್ಲಿ ರಾಷ್ಟ್ರವ್ಯಾಪಿ 'ಯುನೈಟೆಡ್ ರನ್' ಅನ್ನು ಆಯೋಜಿಸಲು ನಿರ್ಧರಿಸಿದೆ. ಸಿಎ ಸಂಸ್ಥೆಯ ಹುಬ್ಬಳ್ಳಿ ಶಾಖೆಯು, ಕೇಶವಾಪುರದಲ್ಲಿ ಇರುವ ಐಸಿಎಐ ಭವನದಿಂದ ಕೇಶ್ವಾಪುರ ಬಸವೇಶ್ವರ ಸರ್ಕಲ್‌ವರೆಗೆ ತಲುಪಿ, ತದನಂತರ ಅಲ್ಲಿಂದ ಕೇಶ್ವಾಪುರದಲ್ಲಿರುವ ಐ.ಸಿ.ಎ.ಐ ಭವನದವರೆಗೆ ಓಟವನ್ನು ಏರ್ಪಡಿಸಿದೆ ಎಂದು ಪ್ರಕಟಣೆ ತಿಳಿಸಿದೆ.

*******

ಧಾರವಾಡ ಜಿಲ್ಲಾಡಳಿ ಹಾಗೂ ಕನ್ನಡ ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ವಚನ ಪಿತಾಮಹ ಡಾಕ್ಟರ್ ಫ.ಗು.ಹಳಕಟ್ಟಿ ಜನ್ಮದಿನ "ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ" ಕಾರ್ಯಕ್ರಮ ಜುಲೈ 2 ರಂದು, ಧಾರವಾಡದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದೆ.

*******